ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

21

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 24/10/20

## ಡಿಸೆಂಬರ್‌ನಲ್ಲಿ ಕಾಮಗಾರಿ ಆರಂಭ । ಪ್ರತಿ ಸಂಸದರಿಗೂ ಪ್ರತ್ಯೇಕ ಕಚೇರಿ

# 2022ಕ್ಕೆ ಸಿದ್ಧಗೊಳ್ಳಲಿದೆ ಹೊಸ ಸಂಸತ್ ಭವನ

**ನವದೆಹಲಿ:** ಹೊಸ ಸಂಸತ್ ಭವನದ ಕಾಮಗಾರಿ ಈ ವರ್ಷದ ಡಿಸೆಂಬರ್‌ನಲ್ಲಿ ಆರಂಭವಾಗಲಿದ್ದು, 2022ರ ಅಕ್ಟೋಬರ್ ವೇಳೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ. ಹೊಸ ಭವನದಲ್ಲಿ ಪ್ರತಿ ಸಂಸದರಿಗೂ ಪ್ರತ್ಯೇಕ ಕಚೇರಿ ಇರಲಿದ್ದು, ಕಾಗದ ರಹಿತ ಸಂವಹನಕ್ಕಾಗಿ ಡಿಜಿಟಲ್ ಮೂಲಸೌಕರ್ಯ ಒಳಗೊಂಡಿರಲಿದೆ. ವಿರಾಮದ ಕೈಸಾಲೆ (ಲೌಂಜ್) ಕಾನ್‌ಸ್ಟಿಟ್ಯೂಷನ್ ಹಾಲ್, ಗ್ರಂಥಾಲಯ, ಸಂಸದೀಯ ಸಮಿತಿ ಕೋಣೆಗಳು, ಭೋಜನದ ಹಾಲ್ ಇರಲಿದೆ.

ವಾಯು ಮತ್ತು ಶಬ್ದ ಮಾಲಿನ್ಯ ತಡೆಯುವಂತಹ ತಂತ್ರಜ್ಞಾನ ಬಳಸಿ ಈ ಕಟ್ಟಡ ನಿರ್ಮಾಣವಾಗಲಿದ್ದು, ಭಾರತದ ಪ್ರಜಾತಂತ್ರ ಪರಂಪರೆಯ ದ್ಯೋತಕವಾದ ಕಾನ್‌ಸ್ಟಿಟ್ಯೂಷನ್ ಹಾಲ್ ವಿಸ್ತಾರವಾಗಿರಲಿದೆ. ಸಂವಿಧಾನದ ಮೂಲಪ್ರತಿಯ ಡಿಜಿಟಲ್‌ರೂಪವನ್ನು ಇಲ್ಲಿ ಪ್ರದರ್ಶಿಸಲಾಗುತ್ತದೆ. ಈ ಹಾಲ್ ವೀಕ್ಷಣೆಗೆ ಸಾರ್ವಜನಿಕರಿಗೆ ಅವಕಾಶ ಇರಲಿದೆ. ಹೊಸ ಕಟ್ಟಡದಲ್ಲಿ ಉಭಯ ಸದನಗಳ ಸಭಾಂಗಣ ಇರಲಿದೆ. ಭವಿಷ್ಯದ ದೃಷ್ಟಿಯಿಂದ 888 ಸದಸ್ಯರಿಗೆ ಆಸನ ಕಲ್ಪಿಸುವಷ್ಟು ವಿಶಾಲತೆಯನ್ನು ಲೋಕಸಭೆ ಹೊಂದಿರಲಿದೆ. ರಾಜ್ಯಸಭೆ 384 ಸದಸ್ಯರು ಆಸೀನರಾಗುವಷ್ಟು ದೊಡ್ಡದಾಗಿರಲಿದೆ. ಹಾಲಿ ಲೋಕಸಭೆಯಲ್ಲಿ 543 ಸದಸ್ಯರಿದ್ದು, ರಾಜ್ಯಸಭೆ 245 ಸದಸ್ಯ ಬಲ ಇದೆ. ಹೊಸ ಕಟ್ಟಡ ಕುರಿತು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಶುಕ್ರವಾರ ಪರಿಶೀಲನಾ ಸಭೆ ನಡೆಸಿದ್ದು, ಕಾಮಗಾರಿ ಗುಣಮಟ್ಟದ್ದಾಗಿರಬೇಕು ಮತ್ತು ಕಾಲಮಿತಿಯಲ್ಲಿ ಮುಗಿಯಬೇಕು ಎಂದು ಸೂಚಿಸಿದ್ದಾರೆ. ಡಿಸೆಂಬರ್‌ನಲ್ಲಿ ಶಿಲಾನ್ಯಾಸ ನಡೆಸಬಹುದು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಗಿದೆ. ಆದರೆ, ದಿನಾಂಕ ನಿಗದಿಯಾಗಿಲ್ಲ. ರಾಷ್ಟ್ರಪತಿ ರಾಮನಾಥ ಕೋವಿಂದ, ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು, ಪ್ರಧಾನಿ ನರೇಂದ್ರ ಮೋದಿ ಇನ್ನಿತರ ಗಣ್ಯರನ್ನು ಭೂಮಿಪೂಜೆ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

**ಟಾಟಾ ಪ್ರಾಜೆಕ್ಟ್‌ಗೆ ಗುತ್ತಿಗೆ:** ಹಾಲಿ ಸಂಸತ್ ಭವನದ ಸಮೀಪದಲ್ಲೇ ಹೊಸ ಸಂಸತ್ ಭವನ ನಿರ್ಮಾಣವಾಗಲಿದ್ದು, ಈ ಗುತ್ತಿಗೆಯನ್ನು ಟಾಟಾ ಪ್ರಾಜೆಕ್ಟ್ಸ್ ಲಿಮಿಟೆಡ್ ಪಡೆದುಕೊಂಡಿದೆ. 861.9 ಕೋಟಿ ರೂ. ಅಂದಾಜು ವೆಚ್ಚವಾಗಿದೆ.



### 93 ವರ್ಷದ ಹಳೇ ಭವನ

**ಈಗಿರುವ ಸಂಸತ್ ಭವನವು (ಇಂಪೀರಿಯಲ್ ಲೆಜಿಸ್ಲೇಟಿವ್ ಕೌನ್ಸಿಲ್) ಬ್ರಿಟಿಷರ ಕಾಲದಲ್ಲಿ ನಿರ್ಮಾಣವಾಗಿದೆ. ಈ ಕಟ್ಟಡದ ವಿನ್ಯಾಸವನ್ನು ಎಡ್ವಿನ್ ಲುಟಿಯೆನ್ಸ್ ಮತ್ತು ಹರ್ಬರ್ಟ್ ಬೇಕರ್ ಮಾಡಿದ್ದು, 1921ರಲ್ಲಿ ಕಾಮಗಾರಿ ಆರಂಭವಾಗಿ 1927ಕ್ಕೆ ಮುಗಿಯಿತು. ಇದಕ್ಕೆ ₹ 83 ಲಕ್ಷ ವೆಚ್ಚವಾಗಿತ್ತು. 1927ರ ಜನವರಿ 18ರಂದು ಈ ಕಟ್ಟಡವನ್ನು ಭಾರತದ ವೈಸ್‌ರಾಯ್ ಲಾರ್ಡ್ ಇರ್ವಿನ್ ಉದ್ಘಾಟಿಸಿದರು. ಮರುದಿನವೇ ಇಂಪೀರಿಯಲ್ ಲೆಜಿಸ್ಲೇಟಿವ್ ಕೌನ್ಸಿಲ್ ಮೊದಲ ಸಭೆ ನಡೆಯಿತು. 1956ರಲ್ಲಿ ಇನ್ನೆರಡು ಅಂತಸ್ತನ್ನು ನಿರ್ಮಿಸಲಾಯಿತು.**